ಆ) ಅವುಗಳ ಪೈಕಿ 46 ಪ್ರಾಥಮಿಕ ಶಾಲೆಗಳಿಗೆ ಕುಡಿಯುವ ನೀರು ಮತ್ತು 67 ಸರ್ಕಾರಿ ಪ್ರಾಥ 'ಕ ಶಾಲೆಗಳಿಗೆ ಶೌಚಾಲಯಗಳನ್ನು ಒದಗಿಸಲಾಗಿದೆ

ಇ) 102 ಸ ಪ್ರಾಥಮಿಕ ಶಾಲೆಗಳಿಗೆ ಕುಡಿಯುವ ನೀರಿನ ಸೌಲಭ್ಯವಿರುವುದೀ 81 ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಶೌಚಾಲಯ ವ್ಯವಸ್ಥೆ ಇರುವ'

ಈ) ಸವಿ. ೨೦೨೨ ಅಭಿಯಾನದಡಿಯಲ್ಲಿ ಅಗತ್ಯತೆಯ ಆಧಾರದ ಮೇಲೆ ಪ್ರಾಥಮಿಕ ಶಾಲೆಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುತ್ತಿದೆ

ಸರ್ಕಾರಿ ಪ್ರೌಢಶಾಲೆಗಳಿಗೆ ಗ್ರಾಮೀಣಾಭಿವೃದ್ಧಿ ಇಲಾಖೆಯ ಸಂಪೂರ್ಣ ಸ್ವಚ್ಛತಾ ಆಂದೋಲನ ಎ ಆರ್ ಡ್ಲ್ಯೂ ಎನ್ ಯೋಜನೆ ಮುಂತಾದ ಯೋಜನೆಗಳಡಿ ಅನುದಾನ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಈ ಸೌಲಭ್ಯವನ್ನು ಒದಗಿಸಲಾಗುತ್ತಿದೆ

558(563) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಪಟ್ಟಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು?

ಇ) ಪ್ರಸ್ತಾವನೆ ಯಾವ ಹಂತದಲ್ಲಿದೆ (ವಿವರ ನೀಡುವುದು)?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಪ್ರಾರಂಭಿಸಲು ಶೈಕ್ಷಣಿಕ ವಲಯಕ್ಕೆ ಬೇಕಾದ ಶಾಲೆ ಮಾನದಂಡ ಅಗತ್ಯವಾದ ಶೈಕ್ಷಣಿಕ ಮಾಹಿತಿಗಳನ್ನು ಬೆಳಗಾವಿ ಜಿಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಪಡೆದು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆ ಸರ್ಕಾರದ ಹಂತದಲ್ಲಿ ಈ ಬಗ್ಗೆ ಪರಿಶೀಲಿಸಲಾಗುತ್ತಿದೆ

ಇ) ಸರ್ಕಾರದ ಪರಿಶೀಲನೆಯಲ್ಲಿದೆ